ಶಾಲಾ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ3/ NMMS ಪರೀಕ್ಷೆ–2023/05/2023–24 ದಿನಾಂಕ:10.01.2024

## ಜ್ಞಾಪನ

**ವಿಷಯ:** 2023–24 ನೇ ಸಾಲಿನ NMMS ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಪ್ರಶ್ನೆಗಳ ಕೀ ಉತ್ತರಗಳಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:**1. Department of school Education & Literacy ನವದೆಹಲಿ ರವರ ಪತ್ರ ಸಂಖ್ಯೆ:F.No.1-9/ 2023-SS, Dated:13-04-2023.
2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:27.12.2023.

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2023–24ನೇ ಸಾಲಿನ NMMS ಪರೀಕ್ಷೆಯನ್ನು **ದಿನಾಂಕ:07.01.2024 ಭಾನುವಾರದಂದು** ಕೆ.ಎಸ್.ಇ.ಎ.ಬಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗಿರುತ್ತದೆ. ಸದರಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಿಗೆ ಸಂಬಂಧಿಸಿದ ಕೀ ಉತ್ತರಗಳನ್ನು ದಿನಾಂಕ:11.01.2024ರಂದು ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರಶ್ನೆಗಳ ಕೀ ಉತ್ತರಗಳಿಗೆ ಸಂಬಂಧಿಸಿದಂತೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಈ ಕಛೇರಿಯಿಂದ ನೀಡಲಾದ ನಿಗದಿತ ನಮೂನೆ (ಮಂಡಳಿಯ ವೆಬ್ ಸೈಟ್‌ನಲ್ಲಿ https://kseab.karnataka.gov.in/ ದೊರೆಯುತ್ತದೆ) ಯಲ್ಲಿ ದಿನಾಂಕ:11.01.2024 ರಿಂದ 16.01.2024ರ ಸಂಜೆ 5.30 ರೊಳಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ.

NMMS ಪರೀಕ್ಷೆಯ ಪ್ರಶ್ನೆಪತ್ರಿಕೆ–1 ಮತ್ತು 2ರ ಪ್ರತಿ ಪ್ರಶ್ನೆಗಳಿಗೆ ಪ್ರತ್ಯೇಕವಾಗಿ ಆಕ್ಷೇಪಣೆಗಳನ್ನು ಪೂರಕ ದಾಖಲೆಗಳೊಂದಿಗೆ ಇ–ಮೇಲ್ ಮೂಲಕ(ksqaacntsenmms@gmail.com) ಅಥವಾ ಅಂಚೆ ಮೂಲಕ **ಕಾರ್ಯನಿರ್ವಾಹಕ ನಿರ್ದೇಶಕರು, ಕೆ.ಎಸ್.ಕ್ಯು.ಎ.ಎ.ಸಿ, ಕೆ.ಎಸ್.ಇ.ಎ.ಬಿ, 1ನೇ ಮಹಡಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003** ಈ ವಿಳಾಸಕ್ಕೆ ದಿನಾಂಕ:16.01.2024 ರ ಸಂಜೆ 5.30ರ ಒಳಗೆ ತಲುಪುವಂತೆ ಸಲ್ಲಿಸುವುದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಬರುವಂತಹ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ.

**ಪ್ರತಿಯನ್ನು ಮಾಹಿತಿಗಾಗಿ :–**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
2. NMMS ಪರೀಕ್ಷೆಗಳಿಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ.
3. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ.
5. ವಿದ್ಯಾರ್ಥಿ/ಪೋಷಕರಿಗೆ.
6. ಕಛೇರಿ ಪ್ರತಿ.